**1 ನೇ ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ,**

**ಟಿ.ನರಸೀಪುರ**

**ದಿನಾಂಕ 7 ನೇ ಮಾರ್ಚ್ 2026**

**ಸಿಸಿ ಸಂಖ್ಯೆ: 1280/2025**

ಫಿರ್ಯಾದಿಃ : ರಾಜ್ಯದ ಪರವಾಗಿ  ತಲಕಾಡು ಪೊಲೀಸ್ ಠಾಣೆ

ವಿರುದ್ಧ

ಆರೋಪಿಗಳು : ಕೆಂಪರಾಜಮ್ಮ ಕೋಂ ಲೇಟ್ ಶ್ರೀಕಾಂತ್,
ವಯಸ್ಸು 52 ವರ್ಷ,
ತಡಿಮಾಲಂಗಿ ಗ್ರಾಮ, ಟಿ.ನರಸೀಪುರ ತಾಲ್ಲೂಕು.

**ದೋಷಾರೋಪಣೆ**

ಶ್ರೀಮತಿ ಎನ್.ನಿವೇದಿತಾ, 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.

ಮೊದಲನೆಯದಾಗಿ ದಿಃ 04/09/2024 ರಂದು ಬೆಳಿಗ್ಗೆ 9.30 ಗಂಟೆ ಸಮಯದಲ್ಲಿ, ತಲಕಾಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ, ತಡಮಾಲಂಗಿ ಗ್ರಾಮದಲ್ಲಿ, ಚಾಸಾ.1 ರವರು ಅವರ ಮನೆಯ ಮುಂಭಾಗ ಯರೋ ವಾಚುಚಾರ ಮಾಡಿರುವ ಬಿಸಾಡಿ ಹೋಗಿದ್ದ ವಸ್ತುಗಳನ್ನು ಚಾಸಾ.2, 3, 4 ಮತ್ತು 5 ರವರಿಗೆ ತೋರಿಸುತ್ತಿದ್ದಾಗ, ಆರೋಪಿಯು ಚಾಸಾ.1 ರವರನ್ನು ಉದ್ದೇಶಿಸಿ ನಾನೇ ಹಾಕಿದ್ದೀನಿ ನನ್ನ ಹತ್ತಿರ ನಿನ್ನ ಆಟ ಏನು ನಡೆಯಲ್ಲ ಲೋಫರ್ ಮುಂಡೆ, ಸೂಳೆ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದು ನಿಂದಿಸಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.**352** ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಮೇಲ್ಕಂಡ ಆರೋಪಿಯಾದ ನೀವು ಚಾಸಾ.1 ರವರಿಗೆ ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದು ಅದನ್ನು

ಕೇಳಿದ್ದಕ್ಕೆ ಆರೋಪಿಯು ಒಂದು ಮರದ ಪಟ್ಟಿಯಿಂದ ಚಾಸಾ.1 ರವರ ಎಡಭಾಗದ ಕಿವಿಯ ಕಪಾಳಕ್ಕೆ ಹೊಡೆದು, ಕೆಳಕ್ಕೆ ಕೆಡವಿಕೊಂಡು ರಸ್ತೆಯಲ್ಲಿ ಬಿದ್ದಿದ್ದ ಇಟ್ಟಿಗೆ ಪೀಸ್ ಎತ್ತಿಕೊಂಡು ಚಾಸಾ.1 ರವರ ಎಡಭಾಗದ ಕತ್ತಿಗೆ ಹೊಡೆದು, ತೀವ್ರ ಸ್ವರೂಪರದ ನೋವುಂಟು ಮಾಡಿದ್ದು, ಆ ಮೂಲಕ ಆರೋಪಿಯಾ ಭಾರತೀಯ ನ್ಯಾಯ ಸಂಹಿತೆ ಕಲಂ 118(1) ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಮೇಲ್ಕಂಡ ಆರೋಪಿಯಾದ ನೀವು  ಚಾಸಾ.1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದ್ದು, ಕಾಲಿನಿಂದ ಒದ್ದಿ ಕೈಯಿಂದ ಹೊಡೆದು, ಸಾಮಾನ್ಯ ಸ್ವರೂಪರದ ನೋವುಂಟು ಮಾಡಿದ್ದು, ಆ ಮೂಲಕ ಆರೋಪಿಯಾ ಭಾರತೀಯ ನ್ಯಾಯ ಸಂಹಿತೆ ಕಲಂ.115(2) ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ನಾಲ್ಕನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಮೇಲ್ಕಂಡ ಆರೋಪಿಯಾದ ನೀವು, ಚಾಸಾ.1 ರವರಿಗೆ ನಿನ್ನನ್ನು ಸಾಯಿಸದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.351(2) ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಪ್ರಶ್ನೆಃ ಈಗ ಓದಿ ಹೇಳಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಉತ್ತರಃ

ಪ್ರಶ್ನೆಃ ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ವಿಚಾರಣೆಯಾಗಬೇಕಾ?
ಉತ್ತರಃ

(ಈ ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ವಿವರಿಸಿದ ನಂತರ ಅವರು ನೀಡಿದ ಉತ್ತರವನ್ನು ನಾನು ನನ್ನ ಸ್ವಂತ ಬರಹದಲ್ಲಿ ದಾಖಲು ಮಾಡಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ)

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**